# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/108/2015-16 ದಿನಾಂಕ:22.09.2016

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಶ್ರೀ ಕೆ.ಬಸವರಾಜ ತಂದೆ ಕೆ. ಗಂಗಪ್ಪ<br>ಗ್ರಾಮ:-ಬೆಣಕಲ್ಲು ತಾ:-ಹೆಚ್.ಬಿ.ಹಳ್ಳಿ | ಶ್ರೀಮತಿ ಕೊಟ್ರಮ್ಮ ಗಂಡ ನಾಗಪ್ಪ<br>ಗ್ರಾಮ:-ಮರಿಯಮ್ಮನಹಳ್ಳಿ ತಾ:-ಹೊಸಪೇಟೆ<br>[ಶ್ರೀ ಕೊಟ್ರೇಶ ಹಿರೇಮಠ, ವಕೀಲರು ಹೊಸಪೇಟೆ] |

**ವಿವಾದಿತ ಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಬೆಣಕಲ್ಲು | 23/2 | 4-00 | ಖುಷ್ಕಿ |
| 2. | ” | ” | 28/ಎ | 0-99 | ” |

ಪೀಠಿಕೆ:-

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ವಿವಾದಿತ ಜಮೀನುಗಳಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ನಿವಾಸಿಯಾದ ಕೆ.ಬಸವರಾಜ ತಂದೆ ಗಂಗಪ್ಪ ಇವರು ನೋಂದಾಯಿತ ದಾನ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-04528-2015-2016 ದಿನಾಂಕ:19.03.2016 ರಂದು ನೋಂದಣಿಯಾಗಿರುತ್ತದೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:21.03.2016 ರಂದು ಜಾರಿಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:11.04.2016 ರಂದು ಶ್ರೀಮತಿ ಕೊಟ್ರಮ್ಮ ಗಂಡ ನಾಗಪ್ಪ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.93/15-16 ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:19.05.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:19.05.2016 ರಿಂದ 08.09.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಅರ್ಜಿದಾರರು ಹಾಜರಾಗಿರುತ್ತಾರೆ. ತಕರಾರುದಾರರು ದಿನಾಂಕ:19.05.2016 ರಿಂದ 27.07.2016 ರವರೆಗೆ ಸತತವಾಗಿ ಗೈರುಹಾಜರಾಗಿರುತ್ತಾರೆ. ಅರ್ಜಿದಾರರು ಹೇಳುವಂತೆ; ನನ್ನ ಅಜ್ಜಿಯ ಆಸ್ತಿಯಾಗಿರುತ್ತದೆ. ದಾನ ಪ್ರಕಾರ ನನ್ನ ಹೆಸರಿಗೆ ಹಕ್ಕು ಬದಲಾವಣೆ ಮಾಡಲು ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ದಿನಾಂಕ:11.08.2016 ರಂದು ಅರ್ಜಿದಾರರು ಹಾಜರಾಗಿರುತ್ತಾರೆ. ಮತ್ತು ತಕರಾರುದಾರ ಪರವಾಗಿ ಕೊಟ್ರೇಶ ಹಿರೇಮಠ, ವಕೀಲರು ಹೊಸಪೇಟೆ ಇವರು ಹಾಜರಾಗಿ ತಮ್ಮ ವಕಾಲತ್ತು ಅರ್ಜಿಯನ್ನು ಸಲ್ಲಿಸಿ ಹೇಳುವಂತೆ; ತಕರಾರುದಾರರು ಪಕ್ಕೀರಮ್ಮ ಪಟ್ಟಾದಾರರಿಗೆ ಅಣ್ಣನ ಮಗಳಾಗಿರುತ್ತಾಳೆ ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ. ಅರ್ಜಿದಾರರು ಹೇಳುವಂತೆ; ಸದರಿ ಜಮೀನು ಪಕ್ಕೀರಮ್ಮ ಇವರ ಸ್ವಯಾರ್ಜಿತ ಆಸ್ತಿಯಾಗಿರುತ್ತದೆ ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಪ್ರಕರಣದಲ್ಲಿ ದಿನಾಂಕ:08.09.2016 ರಂದು ಅರ್ಜಿದಾರರು ಮತ್ತು ತಕರಾರುದಾರರ ಪರವಾಗಿ ಯು.ಕೊಟ್ರೇಶ, ವಕೀಲರು ಹಾಜರಾಗಿರುತ್ತಾರೆ. ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಪ್ರಕರಣದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆ ಮಾಡಲಾಗಿ, ನೋಂದಾಯಿತ ದಾನ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-04528-2015-2016 ದಿನಾಂಕ:19.03.2016 ರನ್ವಯ ಅರ್ಜಿದಾರರ ಹೆಸರಿಗೆ ನೋಂದಾಯಿತ ದಾನ ದಸ್ತಾವೇಜು ಪ್ರಕಾರ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

**-:ಆದೇಶ:-**

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಹಾಗೂ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129 ರನ್ವಯ ಮತ್ತು ಎಂ.ಆರ್.ನಂ.93/2015-16 ರ ಪ್ರಕಾರ, ಕೆ.ಬಸವರಾಜ ತಂದೆ ಕೆ. ಗಂಗಪ್ಪ ಇವರ ಹೆಸರಿಗೆ ನೋಂದಾಯಿತ ದಾನ ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:22.09.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

ಕೆ.ಗಂಗಪ್ಪ

22/9/16

[ವಿ.ಹೆಚ್.ಮಲ್ಲಿಕಾರ್ಜುನ]
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ,ಕೋಗಳಿ

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿ ಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.